ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ನೌಕರರ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-

256 (250) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; ಅವರು ಯಾವ ಇಲಾಖೆಯಿಂದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡಿರುತ್ತಾರೆ;

(ಆ) ಕಳೆದ 5 ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡ ಸರ್ಕಾರಿ ನೌಕರರ ಹೆಸರು ಮತ್ತು ವಿಳಾಸದೊಂದಿಗೆ ಮಾಹಿತಿ ನೀಡುವುದು; ಅವರು ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಸಮಯದಲ್ಲಿ ಅವರ ಮತ್ತು ಕುಟುಂಬದವರ ಹೆಸರಿನಲ್ಲಿರುವ ಸ್ಥಿರಾಸ್ತಿ ಮತ್ತು ಚರಾಸ್ತಿಯ ಒಟ್ಟು ಮೌಲ್ಯ ಎಷ್ಟು;

(ಇ) ಪ್ರಸ್ತುತ ವಿಲೀನಗೊಂಡವರ ಹೆಸರಿನಲ್ಲಿ ಮತ್ತು ಅವರ ಅವಲಂಬಿತರ ಹೆಸರಿನಲ್ಲಿ ಇರುವ ಸ್ಥಿರಾಸ್ತಿ ಮತ್ತು ಚರಾಸ್ತಿಯ ಒಟ್ಟು ಮೌಲ್ಯ ಎಷ್ಟು; ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳ್ಳುವ ಮುನ್ನ ಮತ್ತು ವಿಲೀನದ ನಂತರ ಅವರ ಸ್ಥಿರಾಸ್ತಿ ಮತ್ತು ಚರಾಸ್ತಿಯಲ್ಲಿ ಎಷ್ಟು ಪ್ರಮಾಣದಲ್ಲಿ ಹೆಚ್ಚಳವಾಗಿದೆ;

(ಈ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಕಳೆದ 5 ವರ್ಷಗಳಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಭ್ರಷ್ಟಾಚಾರದ ಆರೋಪದಲ್ಲಿ ಅಮಾನತ್ತುಗೊಂಡವರ ಸಂಖ್ಯೆ ಎಷ್ಟು ?

ಗಿದೆ; ಕ್ರಮ ಕೈಗೊಳ್ಳದಿರಲು ಕಾರಣವೇನು ?